# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1540 |
| ಮಾನ್ಯ ಸದಸ್ಯರ ಹೆಸರು | ಡಾ: ತಳವಾರ್ ಸಾಬಣ್ಣ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 21-03-2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗಡಿ ಜಿಲ್ಲೆ ಬೆಳಗಾವಿಯಲ್ಲಿ ಹೆಚ್ಚಿನ ಶಿಕ್ಷಣ ಸಂಸ್ಥೆಗಳಿದ್ದು, ತಾಲ್ಲೂಕು / ಜಿಲ್ಲಾ ಮಟ್ಟದಲ್ಲಿ ಬಡ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳ ಬೇಡಿಕೆಗೆ ತಕ್ಕಂತೆ ವಸತಿ ನಿಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳಗಾವಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 100 ಮೆಟ್ರಿಕ್ ಪೂರ್ವ ಹಾಗೂ 67 ಮೆಟ್ರಿಕ್ ನಂತರದ ಹೀಗೆ ಒಟ್ಟು 167 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ 14695 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ.<br><br>2024-25ನೇ ಶೈಕ್ಷಣಿಕ ಸಾಲಿನಲ್ಲಿ ಈ ವಿದ್ಯಾರ್ಥಿನಿಲಯಗಳಿಗೆ ಸ್ವೀಕೃತವಾದ ಅರ್ಜಿಗಳು, ಪ್ರವೇಶ ಪಡೆದ ವಿವರ ಈ ಕೆಳಕಂಡಂತಿವೆ :- |

| ವಿದ್ಯಾರ್ಥಿ ನಿಲಯ ವಿಧ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಮಂಜೂರಾತಿ ಸಂಖ್ಯೆ | ಸ್ವೀಕೃತ ವಾದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ಅರ್ಜಿಗಳ ವಿವರ | | | ಬಾಕಿ ಉಳಿದ ಅರ್ಜಿಗಳ ವಿವರ |
|---|---|---|---|---|---|---|---|
| | | | | ನವೀಕರಣ | ಹೊಸದು | ಒಟ್ಟು | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 100 | 5250 | 4153 | 3314 | 1936 | 5250 | 2217 |
| ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 67 | 9445 | 27833 | 4071 | 5374 | 9445 | 22459 |
| **ಒಟ್ಟು** | **167** | **14695** | **31896** | **7385** | **7310** | **14695** | **24676** |

| | | |
|---|---|---|
| ಆ) | ಗ್ರಾಮೀಣ ಪ್ರದೇಶಗಳಿಂದ ಪೋಸ್ಟ್ ಮೆಟ್ರಿಕ್ ಅಧ್ಯಯನಕ್ಕಾಗಿ ಜಿಲ್ಲೆಯಲ್ಲಿನ ಪಟ್ಟಣ/ ನಗರಗಳಿಗೆ ಬರುವ ಹಿಂದುಳಿದ ವರ್ಗಗಳ ಸಂಖ್ಯೆ ಹೆಚ್ಚುತ್ತಿದ್ದು, ಮುಂದಿನ ಶಿಕ್ಷಣಕ್ಕಾಗಿ ವಸತಿ ನಿಲಯಗಳು ಮತ್ತು ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಕುರಿತು ಸರ್ಕಾರ ಕ್ರಮವೇನು; | ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗಳ ಬೇಡಿಕೆಯನುಸಾರ 100 ಸಂಖ್ಯಾಬಲದ 150 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಅದರಂತೆ ಬೆಳಗಾವಿ ಜಿಲ್ಲೆಗೆ 05 ಬಾಲಕರ ಮತ್ತು 03 ಬಾಲಕಿಯರ ಹೀಗೆ ಒಟ್ಟು 08 ವಿದ್ಯಾರ್ಥಿನಿಲಯಗಳನ್ನು ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಮಂಜೂರು ಮಾಡಲಾಗಿದ್ದು, ಪ್ರಸಕ್ತ ಸಾಲಿನಿಂದಲೇ ಸದರಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ. |
| ಇ) | ತೀರಾ ಬಡವರು ಮತ್ತು ಗ್ರಾಮೀಣ ಪ್ರದೇಶ ದವರಾದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಖಾಸಗಿಯಾಗಿ ಬಾಡಿಗೆ ರೂಮು,ಪಿ.ಜಿ. ಊಟದ ವೆಚ್ಚ ಭರಿಸಲಾಗದೆ ಮಧ್ಯದಲ್ಲಿ ಶಿಕ್ಷಣ ನಿಲ್ಲಿಸುತ್ತಿರುವುದು ಅವರ ಶಿಕ್ಷಣದ ಹಕ್ಕು ಕಸಿದುಕೊಂಡಂತ್ತಲ್ಲವೆ; | ಮುಂದುವರೆದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವಿದ್ಯಾರ್ಥಿನಿಲಯಗಳಲ್ಲಿ ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಮೆರಿಟ್ ಮತ್ತು ಪ್ರವರ್ಗವಾರು ಮೇರೆಗೆ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ಕಲ್ಪಿಸಲಾಗುತ್ತಿರುತ್ತದೆ. ಅದರಂತೆ, ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತದೆ. |
| ಈ) | ನೂರಾರು ವಸತಿ ನಿಲಯಗಳು ಬಾಡಿಗೆ ಮನೆಯಲ್ಲಿ ನಡೆಯುತ್ತಿರುವುದರಿಂದ ಅಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದು ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ; | ಬೆಳಗಾವಿ ಜಿಲ್ಲೆಯಲ್ಲಿ 116 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 42 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 09 ಉಚಿತ ಕಟ್ಟಡಗಳಲ್ಲಿ ಹೀಗೆ ಒಟ್ಟು-167 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ಇಲಾಖೆಯ 42 ವಿದ್ಯಾರ್ಥಿನಿಲಯಗಳು ಅಗತ್ಯ ಮೂಲಭೂತ ಸೌಕರ್ಯ ಮತ್ತು ಸ್ಥಳಾವಕಾಶ ಲಭ್ಯವಿರುವ ಸೂಕ್ತ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಮುಂದುವರೆದು, ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಮಂಜೂರಾತಿ ಸಂಖ್ಯೆಗನುಗುಣವಾಗಿ ಬೇಡಿಕೆಯನುಸಾರ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. |

...3..

| | | |
|---|---|---|
| ಉ) | ಸರ್ಕಾರ ತಕ್ಷಣವೆ ತಾಲ್ಲೂಕು / ಜಿಲ್ಲಾ ಮಟ್ಟದಲ್ಲಿ ವಸತಿ ನಿಲಯಗಳನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ವಸತಿ ನಿಲಯಗಳ ಗ್ಯಾರಂಟಿ ಕ್ರಮಕೈಗೊಳ್ಳುವುದೆ? | 2024-25ನೇ ಸಾಲಿನಲ್ಲಿ ಜಿಲ್ಲೆಗಳ ಬೇಡಿಕೆಯನುಸಾರ 100 ಸಂಖ್ಯಾಬಲದ 150 ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಈ ಪೈಕಿ ಬೆಳಗಾವಿ ಜಿಲ್ಲೆಗೆ 05 ಬಾಲಕರ ಮತ್ತು 03 ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಪ್ರಸಕ್ತ ಸಾಲಿನಿಂದಲೇ ಸದರಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ.<br><br>ಆದಾಗ್ಯೂ, ಬೆಳಗಾವಿ ಜಿಲ್ಲೆಯ ವಿವಿಧ ಸ್ಥಳಗಳಲ್ಲಿನ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ಜಿಲ್ಲೆಯ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಅವಲಂಬಿಸಿರುತ್ತದೆ. |

ಸಂಖ್ಯೆ: ಹಿಂವಕ 388 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.